## ಕೊಳಗೇರಿ ಪ್ರದೇಶಗಳ ಅಭಿವೃದ್ಧಿ

**39 (143); ಡಾ॥ ಶಿವರಾಜ್ ಪಾಟೀಲ್ .ಎಸ್**

ಅ) ರಾಯಚೂರು ನಗರ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕೋಳಚೆ ಪ್ರದೇಶಗಳ ಸಂಖ್ಯೆ ಎಷ್ಟು; ಇಲ್ಲಿನ ನಿವಾಸಿಗಳಿಗೆ ನಗರಾಭಿವೃದ್ಧಿ ಇಲಾಖೆಯಿಂದ ವಸತಿ ಸೌಲಭ್ಯಗಳನ್ನು ಕಲ್ಪಿಸುವ ಪ್ರಸ್ತಾವನೆ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈ ಪ್ರಸ್ತಾವನೆಯನ್ನು ಪರಿಶೀಲಿಸಿ ನಗರ ಪ್ರದೇಶದಲ್ಲಿನ ಕೊಳಗೇರಿ ಪ್ರದೇಶಗಳನ್ನು ನಗರಾಭಿವೃದ್ಧಿ ಇಲಾಖೆಯಿಂದ ಅಭಿವೃದ್ಧಿ ಪಡಿಸಲು ಸರ್ಕಾರಕ್ಕಿರುವ ಅಡೆತಡೆಗಳೇನು;

ಇ) ಹಾಗಿದ್ದಲ್ಲಿ, ಯಾವ ಯಾವ ಯೋಜನೆಗಳಡಿ ವಸತಿ ಸೌಲಭ್ಯಗಳನ್ನು ಕಲ್ಪಿಸಲು ಕ್ರಮ ಕೈಗೊಳ್ಳಲಾಗಿದೆ;

ಈ) ರಾಯಚೂರು ನಗರ ಪ್ರದೇಶದಲ್ಲಿ ಕೊಳಚೆ ಪ್ರದೇಶಗಳಲ್ಲಿ ವಾಸಿಸುತ್ತಿರುವ ವಸತಿ ರಹಿತರಿಗೆ ವಸತಿ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಸ್ಥಳ ಗುರುತಿಸಿದೆಯೇ; ಹಾಗಿದ್ದಲ್ಲಿ ನಗರದ ಯಾವ ಭಾಗದಲ್ಲಿ ಸ್ಥಳ ಗುರುತಿಸಲಾಗಿದೆ;

ಉ) ಪ್ರಸ್ತುತ ವರ್ಷದಲ್ಲಿ ಎಷ್ಟು ಮನೆಗಳನ್ನು ನಿರ್ಮಿಸಿಕೊಡಲಾಗುವುದು; ಇದಕ್ಕಾಗಿ ಒದಗಿಸಲಾಗಿರುವ ಅನುದಾನದ ಮೊತ್ತ ಎಷ್ಟು? (ಸಂಪೂರ್ಣ ವಿವರಗಳನ್ನು ನೀಡುವುದು)

**ಶ್ರೀ ವಿನಯಕುಮಾರ್ ಸೊರಕೆ (ಮಾನ್ಯ ನಗರಾಭಿವೃದ್ಧಿ ಸಚಿವರು)**

ಅ) Urban Statistics for HR and Assessment (USHA) ಯೋಜನೆಯಡಿಯಲ್ಲಿ, 2009–10 ನೇ ಸಾಲಿನಲ್ಲಿ ಕೈಗೊಂಡ ಸಾಮಾಜಿಕ ಆರ್ಥಿಕ ಸಮೀಕ್ಷೆಯ ಅನುಸಾರವಾಗಿ ರಾಯಚೂರು ನಗರ ವ್ಯಾಪ್ತಿಯಲ್ಲಿ ಒಟ್ಟು 46 ಕೊಳಚೆ ಪ್ರದೇಶಗಳಿವೆ. ಇದರಲ್ಲಿ ರಾಜೀವ್ ಆವಾಸ್ ಯೋಜನೆಯಡಿ 5 ಕೊಳಚೆ ಪ್ರದೇಶಗಳಲ್ಲಿ ವಾಸಿಸುವ 771

ಕುಟುಂಬಗಳಿಗೆ ವಸತಿ ಸೌಲಭ್ಯಗಳನ್ನು ಕಲ್ಪಿಸಲು ಉದ್ದೇಶಿಸಿ ₹. 35.25 ಕೋಟಿ ಮೊತ್ತದ ವಿಸ್ತೃತ ಯೋಜನಾ ವರದಿ (ಡಿಪಿಆರ್) ಯನ್ನು ಕೇಂದ್ರ ಸರ್ಕಾರದ ಅನುಮೋದನೆಗೆ ಸಲ್ಲಿಸಲಾಗಿದೆ.

ಆ) ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿರುವ ವಿಸ್ತೃತ ಯೋಜನಾ ವರದಿಗೆ ಕೇಂದ್ರ ಮಂಜೂರಾತಿ ಮತ್ತು ಉಸ್ತುವಾರಿ ಸಮಿತಿಯ (CSMC) ಅನುಮೋದನೆ ಬಾಕಿ ಇದೆ.

ಇ) ರಾಜೀವ್ ಆವಾಸ್ ಯೋಜನೆಯಡಿಯಲ್ಲಿ, ರಾಯಚೂರು ನಗರದ 5 ಕೊಳಚೆ ಪ್ರದೇಶಗಳಲ್ಲಿ ವಾಸಿಸುವ 771 ಕುಟುಂಬಗಳಿಗೆ ವಸತಿ ಸೌಲಭ್ಯಗಳನ್ನು ಕಲ್ಪಿಸಲು ಉದ್ದೇಶಿಸಿ ₹. 35.25 ಕೋಟಿ ಮೊತ್ತದ ವಿಸ್ತೃತ ಯೋಜನಾ ವರದಿ (ಡಿಪಿಆರ್) ಗೆ ರಾಜ್ಯಮಟ್ಟದ ಅಧಿಕಾರಯುಕ್ತ ಸಮಿತಿಯು ಅನುಮೋದನೆ ಪಡೆದು ಕೇಂದ್ರ ಸರ್ಕಾರದ ಅನುಮೋದನೆಗೆ ಸಲ್ಲಿಸಲಾಗಿದೆ.

ರಾಜೀವ್ ರಿನ್ ಯೋಜನೆಯಡಿಯಲ್ಲಿ 153 ಫಲಾನುಭವಿಗಳಿಗೆ (ಆರ್ಥಿಕ ದುರ್ಬಲ ವರ್ಗದವರಿಗೆ) ಶೇ.5 ರಿಯಾಯಿತಿ ಬಡ್ಡಿ ದರದ ಸಾಲವನ್ನು ಕಲ್ಪಿಸಿ ವಸತಿ ಸೌಲಭ್ಯ ನೀಡಲಾಗಿದೆ.

ಈ) ರಾಯಚೂರು ನಗರ ಪ್ರದೇಶದ ವ್ಯಾಪ್ತಿಯಲ್ಲಿ ಬರುವ ಸಿಯಾತಲಾಬ, ಸುಕಾನಿ ಕಾಲೋನಿ, ಚಂದ್ರಬಂಧ ಲೇಔಟ್, ನೀರು ಬಾವಿಕುಂಟ ಹರಿಜನವಾಡ ಕೊಳಚೆ ಪ್ರದೇಶಗಳಲ್ಲಿ ವಸತಿ ಗೃಹಗಳನ್ನು ನಿರ್ಮಿಸಲು ಯೋಜಿಸಲಾಗಿದೆ.

ಉ) ರಾಜೀವ್ ಆವಾಸ್ ಯೋಜನೆಯಡಿ ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾದ ವಿಸ್ತೃತ ಯೋಜನಾ ವರದಿಗೆ ಕೇಂದ್ರ ಸರ್ಕಾರವು ಅನುಮೋದನೆ ನೀಡಿದ ನಂತರ ಪೂರ್ಣ ವಿವರಗಳು ಲಭ್ಯವಾಗಲಿದೆ.